ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಸೇವಾ ಭದ್ರತೆ ಒದಗಿಸುವ ಬಗ್ಗೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-

545 (492) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ವಿಕಾಸ ಸೌಧದಲ್ಲಿರುವ ಸರ್ಕಾರಿ ಮುದ್ರಣಾಲಯದ ಘಟಕದಲ್ಲಿ ಕಳೆದ 20 ಕ್ಕೂ ಹೆಚ್ಚು ವರ್ಷಗಳಿಂದ ಗುತ್ತಿಗೆ/ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಡಿಟಿಪಿ ಆಪರೇಟರ್‌ಗಳ ವಿವರ ಒದಗಿಸುವುದು ;

(ಆ) ಕೇವಲ ಬೆರಳಣಿಕೆಯಷ್ಟು ಇರುವ ಸದರಿ ನೌಕರರು ಸರ್ಕಾರಿ ಸೇವೆಗೆ ಸೇರುವ ವಯೋಮಿತಿ ಮೀರಿದ್ದು ; ಯಾವುದೇ ಸೇವಾ ಭದ್ರತೆ ಇಲ್ಲದೆ ಸಂದಿಗ್ಧ ಪರಿಸ್ಥಿತಿಯಲ್ಲಿರುವ ಇವರಿಗೆ ಸೇವಾ ಭದ್ರತೆ ಒದಗಿಸುವ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಇವರಿಗೆ ಸೇವಾ ಭದ್ರತೆ ಮತ್ತು ಸೂಕ್ತ ವೇತನವನ್ನು ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು ?